ಐ) ಮೆಣ್ಣು ಪರೀಕ್ಷೆಯ ಆಧಾರದ ಮೇಲೆ ಮಣ್ಣಿನ ಫಲವತ್ತತೆ ಹೆಚ್ಚಿಸಲು ಕ್ರಮ

ಒ) ರೈತರ ಆತ್ಮಹತ್ಯೆ ಪ್ರಕರಣಗಳು ಒಳಗೊಂಡಿರುವ 6 ಜಿಲ್ಲೆಗಳಾದ ಶಿವಮೊಗ್ಗ, ಚಿತ್ರದುರ್ಗ, ಬೆಳಗಾಂ, ಹಾಸನ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಭಾರತ ಸರ್ಕಾರದ ವಿಶೇಷ ಪ್ಯಾಕೇಜ್ ಇತ್ಯಾದಿ

721 (536) ಶ್ರೀ ಸುರೇಶ್ ಎಸ್ ಮಾರಿಹಾಳ (ಕಿತ್ತೂರು) – ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೈಲಹೊಂಗಲ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ 2006–07ನೇ ಸಾಲಿನ ವಾರ್ಷಿಕ ಕ್ರಿಯಾಯೋಜನೆಯಲ್ಲಿ ರೂ 42 50 ಲಕ್ಷಗಳನ್ನು ಒದಗಿಸುವ ಪ್ರಸ್ತಾವನೆ ಸರ್ಕಾರದಲ್ಲಿದೆಯೇ ,

ಆ) ಹಾಗಿದ್ದಲ್ಲಿ, ಮಂಜೂರಾತಿ ವಿಳಂಬಕ್ಕೆ ಕಾರಣವೇನು ,

ಇ) ತ್ವರಿತವಾಗಿ ಮಂಜೂರಾತಿ ನೀಡಲು ಕ್ರಮಕೈಗೊಳ್ಳಲಾಗುವುದೇ ?

ಶ್ರೀ ಶರಣಬಸಪ್ಪ ದರ್ಶನಾಪುರ (ಕೃಷಿ ಮಾರುಕಟ್ಟೆ ಸಚಿವರು)

ಅ) ಆ) ಮತ್ತು ಇ) ಬೈಲಹೊಂಗಲ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ 2006–07ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ರೂ 42 50 ಲಕ್ಷಗಳ ಮೊತ್ತದ ಹೊಸ ಕಾಮಗಾರಿಗಳು ಮತ್ತು ರೂ 80 06 ಲಕ್ಷಗಳ ಮೊತ್ತದ ಮುಂದುವರೆದ ಕಾಮಗಾರಿಗಳು ಸೇರಿದಂತೆ ಒಟ್ಟು ರೂ 122 56 ಲಕ್ಷಗಳ ಮೊತ್ತದ ಪ್ರಸ್ತಾವನೆಯನ್ನು ಅನುಮೋದನೆಗೆ ಕೃಷಿ ಮಾರುಕಟ್ಟೆ ಆಯುಕ್ತರಿಗೆ ಸಲ್ಲಿಸಿದ್ದು, ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಸಮಿತಿಯ 2006–07ನೇ ಸಾಲಿನಲ್ಲಿ ಎಲ್ಲಾ ಮೂಲಗಳಿಂದ ನಿರೀಕ್ಷಿತ ಆದಾಯ ಸುಮಾರು ರೂ 39 00 ಲಕ್ಷಗಳೆಂದು ಅಂದಾಜಿಸಿದ್ದು, ಸಮಿತಿ ಕಳುಹಿಸಿರುವ ರೂ 122 56 ಲಕ್ಷಗಳ ಪ್ರಸ್ತಾವನೆಯನ್ನು ಆದ್ಯತೆ ಹಾಗೂ ಆದಾಯಕ್ಕನುಗುಣವಾಗಿ ಪುನರ್ ಪರಿಶೀಲಿಸಿ ಮಂಡಿಸಲು ತಿಳಿಸಲಾಗಿದೆ ಪರಿಷ್ಕೃತ ಪ್ರಸ್ತಾವನೆ ಬಂದ ನಂತರ ಅನುಮೋದನೆ ನೀಡಲು ಕ್ರಮ ತೆಗೆದುಕೊಳ್ಳಲಾಗುವುದು